**ಅಸಲು ದಾವ ಸಂಖ್ಯೆ: 463/2018**

**ಪಿ.ಡಬ್ಲೂ -1**

ದಿಃ 02.09.2024 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.

**ಪಾಟೀ ಸವಾಲು ಪ್ರತಿವಾದಿ ಪರ ವಕೀಲರಾದ ಶ್ರೀ ವಿ ಬಿ ಎಮ್ ರವರಿಂದಃ-**

1. ಪ್ರತಿವಾದಿಯು ದಿಃ28-01-1981 ರ ಕರಾರು ಪತ್ರದ ಪ್ರಕಾರ ದಾವಾ ಸ್ವತ್ತಿನ ಕಬ್ಜೆಯಲ್ಲಿ ಇರುತ್ತಾರೆ ಎಂದರೆ ಸರಿಯಲ್ಲ. ನನ್ನ ಮುಂದುವರೆದ ಮುಖ್ಯ ವಿಚಾರಣೆ ಪ್ರಮಾಣ ಪತ್ರದಲ್ಲಿ ನಾನು ದಿಃ28-01-1991 ರ ಕರಾರು ಪತ್ರದ ಬಗ್ಗೆ ನಮೂದು ಮಾಡಿದ್ದು ಅದನ್ನು ತೋರಿಸಲು ನಾನು ದಾಖಲೆ ಹಾಜರುಪಡಿಸಿರುವುದಿಲ್ಲ. ಪ್ರತಿವಾದಿಯು ದಾವಾ ಆಸ್ತಿಯಲ್ಲಿ 1982 ರಲ್ಲಿ ಮನೆಯನ್ನು ಕಟ್ಟಿ ಇಲ್ಲಿಯವರೆಗೂ ಸಹ ದಾವಾ ಆಸ್ತಿಯ ಸ್ವಾಧೀನದಲ್ಲಿ ಇರುತ್ತಾರೆ ಎಂದರೆ ಸರಿಯಲ್ಲ. ಮನೆ ಕಟ್ಟಿದ ನಂತರ ಗ್ರಾಮ ಪಂಚಾಯಿತಿಯವರು ಸದರಿ ಮನೆಗೆ ಮನೆ ನಂಬರ 1/ಎ ಎಂದು ಕೊಟ್ಟಿರುತ್ತಾರೆ ಎಂದರೆ ಸರಿಯಲ್ಲ. ಮನೆ ಕಟ್ಟಿದಾಗಿನಿಂದ ಇಲ್ಲಿಯವರೆಗೂ ಸಹ ಪ್ರತಿವಾದಿಯೇ ಸದರಿ ಮನೆಯ ತೆರಿಗೆ ಕಟ್ಟುತ್ತಿದ್ದಾರೆ ಎಂದರೆ ಸರಿಯಲ್ಲ. ಸದರಿ ಮನೆಯ ಜಾಗದಲ್ಲಿ ಮೊದಲು ಸರ್ವೆ ನಂಬರ 22/2 ಎಂದು ಇದ್ದು ಈಗ ಮನೆ ಕಟ್ಟಿದ ನಂತರ ಅದನ್ನು ಮನೆ ನಂಬರ 1/ಎ ಎಂದು ಪಂಚಾಯಿತಿಯಿಂದ ನಿಡಿ-16 ರಂತೆ ಉತಾರ ನೀಡಿರುತ್ತಾರೆ ಎಂದರೆ ಸರಿಯಲ್ಲ. ಸದರಿ ಜಾಗದಲ್ಲಿ ನಾನು ಸ್ವಾಧೀನದಲ್ಲಿ ಇರುತ್ತೇನೆ ಎಂದು ತೋರಿಸಲು ನನ್ನ ಬಳಿ ಯಾವುದೇ ದಾಖಲೆ ಇರುವುದಿಲ್ಲ ಎಂದರೆ ಸರಿಯಲ್ಲ. ಗ್ರಾಮ ಪಂಚಾಯಿತಿ ಸ್ವತ್ತಾದ 1/ಎ ರಲ್ಲಿ ನಾನು ಸ್ವಾಧೀನದಲ್ಲಿ ಇರುತ್ತೇನೆ ಎಂದು ತೋರಿಸಲು ಗ್ರಾಮ ಪಂಚಾಯಿತಿಯವರು ನೀಡಿರುವ ಯಾವುದೇ ದಾಖಲೆಯನ್ನು ನಾನು ಹಾಜರುಪಡಿಸಿರುವುದಿಲ್ಲ ಎಂದರೆ ಸರಿ. ನಾನು ದಾವಾ ಸ್ವತ್ತಿನ ಸ್ವಾಧೀನದಲ್ಲಿ ಇರುವುದಿಲ್ಲ ಎಂದು ತಿಳಿದಿದ್ದರೂ ಸಹ ಸುಳ್ಳು ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಗ್ರಾಮ ಪಂಚಾಯಿತಿ ಸ್ವತ್ತಾದ 1/ಎ ಗೆ ಸಂಬಂಧಪಟ್ಟಂತೆ ನಾನು ಮನೆಯ ತೆರಿಗೆ

ಪಾವತಿ ಮಾಡಿದ ಬಗ್ಗೆ ನನ್ನ ಬಳಿ ದಾಖಲೆ ಇರುವುದಿಲ್ಲ ಎಂದರೆ ಸಾಕ್ಷಿಯು ಸದರಿ ಸ್ವತ್ತು ವ್ಯವಸಾಯಿಕ ಜಮೀನು ಆಗಿರುತ್ತದೆ ಎಂದು ನುಡಿಯುತ್ತಾರೆ. ದಾವಾ ಸ್ವತ್ತು ವ್ಯವಸಾಯಿಕ ಜಮೀನು ಆಗಿದ್ದು ಅದರಲ್ಲಿ ಈಗ ಯಾವುದೇ ಬೆಳೆ ಬೆಳೆಯುತ್ತಿಲ್ಲ. ದಾವಾ ಸ್ವತ್ತು ಈಗ ವ್ಯವಸಾಯಿಕ ಜಮೀನಾಗಿ ಉಳಿದಿರುವುದಿಲ್ಲ ಬದಲಾಗಿ ಅದು ಗ್ರಾಮ ಪಂಚಾಯಿತಿ ಸ್ವತ್ತಾಗಿರುತ್ತದೆ ಎಂದರೆ ಸರಿಯಲ್ಲ.

**ಮರುವಿಚಾರಣೆ ಇರುವುದಿಲ್ಲ.**

**(ಸಾಕ್ಷಿಯ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)**

**ಓ.ಹೇ.ಕೇ ಸರಿಯಿದೆ.**

**Sd/-**

**ಪ್ರಧಾನ ಸಿವಿಲ್ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಧೀಶರು,**

**ಬೆಳಗಾವಿ.**